**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/74/ಸಂಮವಿ/2017-18/ವಿವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ :27.10.2017.

**ಸುತ್ತೋಲೆ**

ವಿಷಯ : 2017-18ನೇ ಸಾಲಿನಲ್ಲಿ ಸಂತೂರ್ ಮಹಿಳಾ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ಬಗ್ಗೆ.

ಉಲ್ಲೇಖ: ಸಮನ್ವಯಾಧಿಕಾರಿಗಳು, ಪ್ಲೇಸ್‌ಮೆಂಟ್ ಸೆಲ್, ಕೇಂದ್ರ ಕಛೇರಿ, ಬೆಂಗಳೂರು ರವರ ದಿ:25.10.2017ರ ಪತ್ರ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ 2017-18ನೇ ಸಾಲಿನಲ್ಲಿ ಸಂತೂರ್ ಮಹಿಳಾ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಆಹ್ವಾನಿಸಲಾಗಿದ್ದು, ಅದರನ್ವಯ ಒಂದರಿಂದ ಹತ್ತನೇ ತರಗತಿಯವರೆಗೆ ಸರ್ಕಾರಿ ಶಾಲೆಗಳಲ್ಲಿ ಹಾಗೂ 2016-17ನೇ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತೀಯ ಪಿ.ಯು.ಸಿಯಲ್ಲಿ ಉತ್ತೀರ್ಣಗೊಂಡು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರವೇಶ ಪಡೆದು ವ್ಯಾಸಂಗ ಮುಂದುವರೆಸಿರುವ ವಿದ್ಯಾರ್ಥಿನಿಯರು ವಿಪ್ರೋ ಸಂಸ್ಥೆಯವರು ನೀಡುತ್ತಿರುವ ಸಂತೂರ್ ವಿಮೆನ್ಸ್ ಸ್ಕಾಲರ್‌ಶಿಪ್‌ಗೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಸದರಿ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅಕ್ಟೋಬರ್ 31, 2017 ಕೊನೆಯ ದಿನಾಂಕವಾಗಿದ್ದು, ಆಸಕ್ತ ವಿದ್ಯಾರ್ಥಿನಿಯರು **www.santoorscholarship.com** ನೋಡಬಹುದಾಗಿದೆ. ಅಥವಾ **santoor.scholarship@wipro.com** ಗೆ ಇ-ಮೇಲ್ ರವಾನಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ. ಅಥವಾ +917337835166 ಗೆ ಕರೆ ಮಾಡಿ ಮಾಹಿತಿ ಪಡೆಯಬಹುದಾಗಿದೆ. ಸದರಿ ಮಾಹಿತಿಯನ್ನು ಎಲ್ಲಾ ಪ್ರಾಂಶುಪಾಲರುಗಳು ತಮ್ಮ ಕಾಲೇಜುಗಳ ಸೂಚನಾಫಲಕದಲ್ಲಿ ಅಳವಡಿಸಿ ಹಾಗೂ ತರಗತಿಗಳಿಗೆ ತೆರಳಿ ಮಾಹಿತಿ ನೀಡಿ, ಹೆಚ್ಚಿನ ವಿದ್ಯಾರ್ಥಿನಿಯರಿಗೆ ಸದರಿ ವಿದ್ಯಾರ್ಥಿವೇತನಕ್ಕಾಗಿ ಆನ್ ಲೈನ್‌ನಲ್ಲಿ ಸಂತೂರ್ ಇವರ ಸಂಸ್ಥೆಗೆ ಅರ್ಜಿಯನ್ನು ಸಲ್ಲಿಸುವಂತೆ ತಿಳಿಸಿ. ಹಾರ್ಡ್ ಕಾಪಿಯನ್ನು ಈ ಕಛೇರಿಗೆ ಸಲ್ಲಿಸದೇ ನೇರವಾಗಿ **ಸಮನ್ವಯಾಧಿಕಾರಿಗಳು, Wipro Cares-Santoor Scholarship, Doddakonnelli, Sarjapur Road, Bangalore-560035** ಇವರಿಗೆ ರವಾನಿಸುವಂತೆ ಈ ಮೂಲಕ ತಿಳಿಸಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು**

**ಇವರಿಗೆ :**

ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು

**ಪ್ರತಿಯನ್ನು :**

1. ಪ್ರಾದೇಶಿಕ ಜಂಟಿ ನಿರ್ದೇಶಕರು - ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಕಲ್ಬುರ್ಗಿ ಹಾಗೂ ಶಿವಮೊಗ್ಗ - ತಮ್ಮ ಕಛೇರಿ ವ್ಯಾಪ್ತಿಯ ಎಲ್ಲಾ ಕಾಲೇಜುಗಳಿಗೆ ತುರ್ತಾಗಿ ಸದರಿ ಮಾಹಿತಿಯನ್ನು ರವಾನಿಸಿ ಎಲ್ಲಾ ಅರ್ಹ ವಿದ್ಯಾರ್ಥಿನಿಯರಿಗೆ ಸದರಿ ವಿದ್ಯಾರ್ಥಿವೇತನ ದೊರಕಿಸಿಕೊಡಲು ಸೂಕ್ತ ಕ್ರಮಕೈಗೊಳ್ಳುವುದು.
2. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು ಸದರಿ ಸುತ್ತೋಲೆಯನ್ನು ಇಲಾಖಾ ವೆಬ್-ಸೈಟ್‌ನಲ್ಲಿ ಅಳವಡಿಸುವುದು.
3. ಕಛೇರಿ ಪ್ರತಿ.

D:2017-18/Santoor